# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎನ್.ಎಂ.ಕೊಣಸಾಲಿ, ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಬಿ.ಬಿ.ಆನವಟ್ಟಿ (ನಿವೃತ್ತ) ಹಾಗೂ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಹೆಚ್.ಆರ್.ಕಿತ್ತೂರ (ನಿವೃತ್ತ) ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/1675/2013/ARLO-1, ದಿನಾಂಕ:04.10.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು–1 ರವರು ದಿನಾಂಕ: 28.09.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಉಪ್ಪಾರ ಓಣಿ ಕೋಟೆ ರಸ್ತೆಯ ವಾಸಿಯಾದ ಶ್ರೀ ಶಿವಕುಮಾರ್ ದೇವೇಂದ್ರಪ್ಪ ಉಪ್ಪಾರ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಕಾರ್ಯದರ್ಶಿಗಳ ವಿರುದ್ಧ ಸರ್ಕಾರಿ ಆಸ್ತಿ ಒತ್ತುವರಿ ಮಾಡಿ ಕಟ್ಟಡ ಕಟ್ಟಿದ್ದರೂ ಸಹ ಯಾವುದೇ ಕ್ರಮವಹಿಸದೆ ಕರ್ತವ್ಯ ಲೋಪ ಎಸಗಿರುವ ಸಂಬಂಧ ನೀಡಿರುವ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆ ಮಾಡಲಾಗಿದೆ.

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಈ ಪ್ರಕರಣದಲ್ಲಿ ಭಾಗಿಯಾಗಿರುವ ಎದುರುದಾರರಾದ ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎನ್.ಎಂ.ಕೊಣಸಾಲಿ, ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಬಿ.ಬಿ.ಆನವಟ್ಟಿ (ನಿವೃತ್ತ) ಹಾಗೂ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಹೆಚ್.ಆರ್.ಕಿತ್ತೂರ (ನಿವೃತ್ತ) ಇವರುಗಳು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಹಾಗೂ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎನ್.ಎಂ.ಕೊಣಸಾಲಿ, ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಬಿ.ಬಿ.ಆನವಟ್ಟಿ (ನಿವೃತ್ತ) ಹಾಗೂ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಹೆಚ್.ಆರ್.ಕಿತ್ತೂರ (ನಿವೃತ್ತ) ಇವರುಗಳ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 697 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 07.11.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎನ್.ಎಂ.ಕೊಣಸಾಲಿ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಬಿ.ಬಿ.ಆನವಟ್ಟಿ (ನಿವೃತ್ತ) ಹಾಗೂ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿದ್ದ ಶ್ರೀ ಹೆಚ್.ಆರ್.ಕಿತ್ತೂರ (ನಿವೃತ್ತ) ಇವರುಗಳು ನಿವೃತ್ತರಾಗಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(1) ರಡಿ, ಸದರಿ ನಿಯಮಾವಳಿಗಳ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
(ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ಲಗತ್ತುಗಳು ಹಾಗೂ ಉಪಲೋಕಾಯುಕ್ತ ವರದಿಯನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಹಿರೇಕೆರೂರು ತಾಲ್ಲೂಕು ಪಂಚಾಯತಿ, ಹಿರೇಕೆರೂರು, ಹಾವೇರಿ ಜಿಲ್ಲೆ.
(ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಎನ್.ಎಂ.ಕೊಣಸಾಲಿ, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಟ್ಟಿಹಳ್ಳಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
7) ಶ್ರೀ ಬಿ.ಬಿ.ಆನವಟ್ಟಿ (ನಿವೃತ್ತ), ಗ್ರಾಮ ಪಂಚಾಯತಿ ಕಾರ್ಯದರ್ಶಿ, ರಟ್ಟಿಹಳ್ಳಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
8) ಶ್ರೀ ಹೆಚ್.ಆರ್.ಕಿತ್ತೂರ (ನಿವೃತ್ತ), ಗ್ರಾಮ ಪಂಚಾಯತಿ ಕಾರ್ಯದರ್ಶಿ, ರಟ್ಟಿಹಳ್ಳಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
9) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.